8 55

ಕರ್ನಾಟಕ ಸರ್ಕಾರ

ವಾಣಿಜ್ಯ ತೆರಿಗೆಗಳ ಇಲಾಖೆ

ಸಂ.ವಾತೆಅಆ/ಜಾರಿ/ದವ/ವಾವಿ/ಸಿಆರ್–1/2018–19

ವಾಣಿಜ್ಯ ತೆರಿಗೆ ಅಪರ ಆಯುಕ್ತರವರ ಕಛೇರಿ,
(ಜಾರಿ)–ದಕ್ಷಿಣ ವಲಯ, ವಾಣಿಜ್ಯ ತೆರಿಗೆ
ಕಾರ್ಯಾಲಯ–2, ಬಿ ಬ್ಲಾಕ್,ಕೋರಮಂಗಲ,
ಬೆಂಗಳೂರು–560047,ದಿನಾಂಕ 04-09-2018.

Commissioner of Commercial Taxes, Bangalore-9.
11 SEP 2018
No: 1213 D.C.C.T. (e-Governance)

## ಪ್ರಕಟಣೆ

ವಿಷಯ: ದಿ: 01.10.2018 ರಿಂದ ದಿ: 30.09.2019ರ ಅವಧಿಗೆ ವಾಣಿಜ್ಯ ತೆರಿಗೆ ಅಪರ ಆಯುಕ್ತರ ಕಛೇರಿ(ಜಾರಿ) ದ.ವ., ಬೆಂಗಳೂರು, ಈ ಕಛೇರಿಗೆ ಸಾಮಾನ್ಯ ಟೆಂಡರ್ ಪ್ರಕ್ರಿಯೆ ಮುಖೇನ ಖಾಸಗಿ ವಾಹನಗಳನ್ನು ಬಾಡಿಗೆಗೆ ಪಡೆದುಕೊಳ್ಳುವ ಬಗ್ಗೆ.

ಉಲ್ಲೇಖ: ಮಾನ್ಯ ವಾಣಿಜ್ಯ ತೆರಿಗೆ ಆಯುಕ್ತರವರ ಸುತ್ತೋಲೆ ಸಂ.ವಿಹೆಚ್‌ಟಿ/ಸಿಆರ್–07/2018–19, ದಿ.14.08.2018.

* * *

ವಾಣಿಜ್ಯ ತೆರಿಗೆ ಅಪರ ಆಯುಕ್ತರು (ಜಾರಿ)–ದಕ್ಷಿಣ ವಲಯ, ಬೆಂಗಳೂರು ಇವರ ಕಛೇರಿಯ ಉಪಯೋಗಕ್ಕಾಗಿ ಮೂವತ್ತೈದು ಖಾಸಗಿ ವಾಹನಗಳನ್ನು ಮಾಸಿಕ ಬಾಡಿಗೆ ಆಧಾರದ ಮೇಲೆ ಪಡೆಯಲು ಉಲ್ಲೇಖದಲ್ಲಿ ತಿಳಿಸಿರುವ ಮಾನ್ಯ ಆಯುಕ್ತರ ಪತ್ರದಲ್ಲಿ ಅನುಮತಿಸಿರುವುದರಿಂದ, ಅಧಿಕೃತ ಟ್ರಾವಲ್ ಏಜನ್ಸಿ/ಸಂಸ್ಥೆ, ಮಾಲೀಕರೇ ಚಾಲಕರಾಗಿರುವವರಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಆಸಕ್ತ ಒಬ್ಬ ವಾಹನ ಮಾಲೀಕ/ಚಾಲಕರು ಒಂದು ವಾಹನ ಸೇವೆಗೆ ಮಾತ್ರ ಅರ್ಜಿಯನ್ನು ಸಲ್ಲಿಸುವುದು. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 96 ಶಿವಾನೀ 2012, ದಿ:23.08.2012 ರಲ್ಲಿ ತಿಳಿಸಿರುವ ನಿಯಮಗಳನ್ವಯ ಖಾಸಗಿ ವಾಹನಗಳ ಸೇವೆಯನ್ನು ಪಡೆಯಲಾಗುವುದು.

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 96 ಶಿವಾನೀ 2012, ಬೆಂಗಳೂರು ದಿ: 23.08.2012ರ ಅನ್ವಯ ವಾಹನಗಳ ಬಾಡಿಗೆ ತಿಂಗಳಿಗೆ ಮೊತ್ತ ರೂ.25,000–00 ನೀಡಲಾಗುವುದು.

2. ವಾಹನದ ಮಾದರಿಯು 2014 ಮತ್ತು ನಂತರದಾಗಿರತಕ್ಕದ್ದು, ಪ್ರತಿ ವಾಹನದ ಗುಣಮಟ್ಟವನ್ನು ಹಾಗೂ ಚಾಲನ ಕೌಶಲ್ಯವನ್ನು ಪರಿಶೀಲಿಸಿ ನಂತರವೇ ವಾಹನಗಳನ್ನು ತೆಗೆದುಕೊಳ್ಳಲಾಗುದು.

3. ದಿ:01.10.2018 ರಿಂದ ಅನ್ವಯವಾಗುವಂತೆ ಈ ಹಿಂದೆ ಸತತವಾಗಿ 5 ವರ್ಷಗಳ ಕಾಲ ವಾಣಿಜ್ಯ ತೆರಿಗೆಗಳ ಇಲಾಖೆಯಲ್ಲಿ ಸೇವೆ ಸಲ್ಲಿಸಿರುವ ಯಾವುದೇ ಮಾಲಿಕರೇ ಚಾಲಕರಾಗಿರುವ ಖಾಸಗಿ ವಾಹನಗಳ ಅರ್ಜಿಗಳನ್ನು ಪರಿಗಣಿಸಿರುವುದಿಲ್ಲ.

14/9/18
See overleaf (5).
CTI (e-gov)

4. ಗುತ್ತಿಗೆಯ ಅವಧಿ ದಿನಾಂಕ 01-10-2018 ರಿಂದ 30-09-2019 ರವರೆಗೆ

ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ **20.09.2018 ಸಂಜೆ 5.00 ಘಂಟೆಯವರೆಗೆ**. ಆ ನಂತರ ಸಲ್ಲಿಸಿದ ಅರ್ಜಿಗಳನ್ನು ಪುರಸ್ಕರಿಸಲಾಗುವುದಿಲ್ಲ.

ಅರ್ಹಗೊಂಡ ಟ್ರಾವಲ್ ಏಜನ್ಸಿ/ಸಂಸ್ಥೆ, ಮಾಲೀಕರೇ ಚಾಲಕರಾಗಿರುವ ವಾಹನ ಮಾಲೀಕ/ಚಾಲಕರ ವಿವರವನ್ನು ಇಲಾಖೆಯ ಸೂಚನಾ ಫಲಕ ಹಾಗೂ ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು/ವಿವರಗಳು:

| | |
|---|---|
| 1 | ಅರ್ಜಿದಾರರ ಹೆಸರು,ವಿಳಾಸ ಹಾಗೂ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳು-2 |
| 2 | ಏಜನ್ಸಿ/ಸಂಸ್ಥೆಯವರಿಗೆ:<br>ಏಜನ್ಸಿಯ/ಸಂಸ್ಥೆಯ ಖಾಯಂ ವಿಳಾಸ, ದೂರವಾಣಿ ಸಂಖ್ಯೆ ಮತ್ತು ವಾಹನಗಳ ಸೇವೆಯ ಅನುಭವದ ಬಗ್ಗೆ ಖಾತ್ರಿ ಪತ್ರ<br>ಮಾಲೀಕರೇ ಚಾಲಕರಾಗಿರುವವರಿಗೆ:<br>ವಿಳಾಸದ ದಾಖಲೆ (ಮತದಾರರ ಗುರುತಿನ ಚೀಟಿ/ರೇಷನ್ ಕಾರ್ಡ್/ಆಧಾರ್ ಕಾರ್ಡ್/ಪಾಸ್ ಪೋರ್ಟ್ ಅಥವಾ ಇತರೆ ಭಾವಚಿತ್ರ ಹೊಂದಿರುವ ಗುರುತಿನ ಚೀಟಿ ಹಾಗೂ ಖಾಯಂ ವಿಳಾಸದ ದಾಖಲೆ, ಬ್ಯಾಂಕ್ ಖಾತೆಯ ವಿವರಗಳು/ಚೆಕ್ಕಿನ ಪ್ರತಿ. |
| 3 | ವಾಹನದ ನೊಂದಣಿ ಪುಸ್ತಕದ ಪ್ರತಿ – ಪ್ರಮಾಣ ಪತ್ರ |
| 4 | ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನೀಡಿರುವ ವಾಹನದ ವಿಮಾ ಪಾಲಿಸಿಯ ಪ್ರತಿ |
| 5 | ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನೀಡಿರುವ ವಾಹನ ಚಾಲನಾ ಪರವಾನಗಿ ಪ್ರತಿ |
| 6 | ರೋಡ್ ತೆರಿಗೆ ಪಾವತಿಸಿರುವ ವಿವರ – |
| 7 | ಮಾಲೀಕರಿಗೆ ಸಂಬಂಧಿಸಿದಂತೆ ಡ್ರೈವಿಂಗ್ ಲೈಸನ್ಸ್<br>ಚಾಲಕರ ದೈಹಿಕ ಸಾಮರ್ಥ ಪ್ರಮಾಣ ಪತ್ರ |
| 8 | ಪಾನ್ ಕಾರ್ಡ್ ಮತ್ತು ಆಧಾರ್ ಕಾರ್ಡ್ ನಮೂದಿಸತಕ್ಕದ್ದು. |
| 9 | ಮೇಲ್ಕಂಡ ವಿವರಗಳು ಹಾಗೂ ಎಲ್ಲಾ ದಾಖಲಾತಿಗಳ ಪ್ರತಿಗಳನ್ನು ಸೀಲು ಮಾಡಿದ ಲಕೋಟೆಯಲ್ಲಿಟ್ಟು, ಲಕೋಟೆಯ ಮೇಲೆ ದಪ್ಪ ಅಕ್ಷರದಲ್ಲಿ <u>ಖಾಸಗಿ ವಾಹನ ಚಾಲಕರ/ಮಾಲೀಕರ/ಟ್ರಾವಲ್ ಏಜನ್ಸಿ/ಸಂಸ್ಥೆಯವರ ಹೊರಗುತ್ತಿಗೆ ಸೇವೆ ಸಲ್ಲಿಸಲು ಅರ್ಜಿ</u> ಎಂದು ನಮೂದಿಸುವುದು |
| 10 | ಅಪೂರ್ಣ ವಿವರಗಳು ಹಾಗೂ ಮೇಲ್ಕಂಡ ದಾಖಲಾತಿಗಳನ್ನು ಸಲ್ಲಿಸದೇ ಇದ್ದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು |
| 11 | ಅರ್ಜಿಗಳನ್ನು ಖುದ್ದಾಗಿ ವಾಣಿಜ್ಯ ತೆರಿಗೆ ಅಪರ ಆಯುಕ್ತರವರ ಕಛೇರಿ(ಜಾರಿ)-ದಕ್ಷಿಣ ವಲಯ, ಕೊಠಡಿ ಸಂಖ್ಯೆ-308, ಮೂರನೇ ಮಹಡಿ, ಬಿ ಬ್ಲಾಕ್, ವಾಣಿಜ್ಯ ತೆರಿಗೆ ಕಾರ್ಯಾಲಯ-2, ಕೋರಮಂಗಲ, ಬೆಂಗಳೂರು ಇವರ ಶಾಖೆಯಲ್ಲಿ ಸಲ್ಲಿಸುವುದು ಹಾಗೂ ಅರ್ಜಿಗಳ ಸ್ವೀಕೃತಿ ಅನುಸಾರವಾಗಿ ಕ್ರಮ ಸಂಖ್ಯೆ ನೀಡಲಾಗುವುದು. |
| 12 | ಅರ್ಜಿಗಳನ್ನು ಸಲ್ಲಿಸಿರುವುದಕ್ಕೆ ಸ್ವೀಕೃತಿ ಪಡೆಯುವುದು ಹಾಗೂ ಕಾರ್ಯ ನಿರ್ವಹಣೆಯಲ್ಲಿ ಪಾಲಿಸಬೇಕಾದ ನಿಯಮಗಳು/ಷರತ್ತುಗಳ ವಿವರಗಳ ಪಟ್ಟಿ ಅನ್ವಯ ಖಡ್ಡಾಯವಾಗಿ ನಿಯಮಗಳನ್ನು ಅರ್ಹಗೊಳ್ಳುವ ವಾಹನ ಮಾಲೀಕ/ಚಾಲಕರು/ಟ್ರಾವಲ್ ಏಜನ್ಸಿ/ಸಂಸ್ಥೆಯವರು ಖಡ್ಡಾಯವಾಗಿ ಪಾಲಿಸತಕ್ಕದ್ದು |
| 13 | ಅರ್ಹಗೊಂಡ ಅರ್ಜಿದಾರರ ವಿವರಗಳ ಪಟ್ಟಿಯ ಪ್ರಕಟಣೆ ದಿನಾಂಕ 26-09-2018 |